# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 860 |
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09/03/2021 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ, ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳು ಸರ್ಕಾರದ ಮುಂದಿದೆಯೇ; | ಕೇಂದ್ರ ಜನಗಣತಿ ನಿರ್ದೇಶನಾಲಯದ ಸೂಚನೆಯನ್ವಯ ಸರ್ಕಾರದ ಆದೇಶ ಸಂಖ್ಯೆಃ ಕಂಇ 18 ಎಲ್ ಆರ್ ಡಿ 2019, ದಿನಾಂಕ 18/09/2020 ರಲ್ಲಿ, ದಿನಾಂಕ 01/01/2021 ರಿಂದ ಜನಗಣತಿ ಮುಕ್ತಾಯವಾಗುವವರೆಗೂ ಯಾವುದೇ ಆಡಳಿತಾತ್ಮಕ ಗಡಿಗಳನ್ನು ಬದಲಾವಣೆ ಮಾಡದಿರಲು ಆದೇಶ ಹೊರಡಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಹೊಸ ಪ್ರಸ್ತಾವನೆಗಳನ್ನು ಪರಿಗಣಿಸಲು ಪ್ರಸ್ತುತ ಅವಕಾಶವಿರುವುದಿಲ್ಲ.<br><br>ದಿನಾಂಕ 31/12/2020ರೊಳಗೆ ಹೊರಡಿಸಲಾಗಿರುವ ಕರಡು ಅಧಿಸೂಚನೆಗಳನ್ನು ಅಂತಿಮಗೊಳಿಸಲು ಕ್ರಮವಹಿಸಲಾಗುತ್ತಿದೆ. |
| (ಆ) | ಗ್ರಾಮ ಸಭೆಗಳನ್ನು ಪುರಸಭೆಗಳನ್ನಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡಗಳೇನು; | ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ ನಿಯಮ 3(1), 3(2) ಮತ್ತು 9 ಗಳನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು.<br><br>1. ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು,<br>2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 1,500 ಕ್ಕಿಂತ ಕಡಿಮೆ ಇಲ್ಲದಿರುವುದು,<br>3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು,<br>4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು. |

| | | |
|---|---|---|
| | | ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ನಿಯಮ 3(1), 3(2) ಹಾಗೂ 9 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು.<br>1. ಆ ಪ್ರದೇಶದ ಜನಸಂಖ್ಯೆ 50,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 3 ಲಕ್ಷಕ್ಕೆ ಹೆಚ್ಚಿಲ್ಲದಂತಿರಬೇಕು,<br>2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 1500 ಕ್ಕಿಂತ ಕಡಿಮೆ ಇಲ್ಲದಿರುವುದು,<br>3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು,<br>4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು. |
| (ಇ) | ಬೆಳಗಾವಿ ಜಿಲ್ಲೆಯಲ್ಲಿನ ಎಷ್ಟು ಹಾಗೂ ಯಾವ ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಹಾಗೂ ಪುರಸಭೆಗಳನ್ನು ನಗರಸಭೆಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗಳಿವೆ? | ಪ್ರಸಕ್ತ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಧೂಪದಾಳ ಗ್ರಾಮ ಪಂಚಾಯಿತಿಯನ್ನು ಮಲ್ಲಾಪೂರ ಪಿ.ಜಿ ಪಟ್ಟಣ ಪಂಚಾಯಿತಿಗೆ ಸೇರಿಸಿಕೊಂಡು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.<br>ಮುಂದುವರೆದು, ಗ್ರಾಮ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮತ್ತು ಪುರಸಭೆಯನ್ನು ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ನಅಇ/07/ಎಲ್‌ಸಿಕ್ಯೂ/2021

**(ಎನ್. ನಾಗರಾಜು ಎಂ.ಟಿ.ಬಿ)**
ಪೌರಾಡಳಿತ ಮತ್ತು ಸಕ್ಕರೆ ಸಚಿವರು